ಆ) ಎಲ್ಲಾ 13 ಕೈಗಾರಿಕಾ ಘಟಕಗಳು ಉತ್ತಮ ಸ್ಥಿತಿಯಲ್ಲಿವೆ.

ಇ) ಬೀದರ್ ಜಿಲ್ಲೆಯಲ್ಲಿರುವ ಕಾರ್ಖಾನೆಗಳ ಮಾಲೀಕರುಗಳು ಕಳೆದ ಮೂರು ವರ್ಷಗಳಲ್ಲಿ (2012–13, 2013–14 ಹಾಗೂ 2014–15 ನೇ ಸಾಲಿನಲ್ಲಿ) ಕಾರ್ಮಿಕರಿಗೆ ಕನಿಷ್ಠ ವೇತನ ಪಾವತಿಸದೆ ಇರುವ ಹಾಗೂ ಭದ್ರತೆ ಒದಗಿಸದೆ ಇರುವ ಪ್ರಕರಣಗಳು ಕಂಡುಬಂದಿರುವುದಿಲ್ಲ.

ಈ) ಅನ್ವಯಿಸುವುದಿಲ್ಲ. ಆದಾಗ್ಯೂ ಕಾರ್ಖಾನೆಗಳ ಮಾಲೀಕರುಗಳು ಕಾರ್ಮಿಕರಿಗೆ ಕನಿಷ್ಠ ವೇತನ ಪಾವತಿಸದೆ ಇರುವ ಹಾಗೂ ರಕ್ಷಣೆ ಒದಗಿಸದೆ ಇರುವ ಪ್ರಕರಣಗಳು ಕಂಡು ಬಂದಲ್ಲಿ, 1948 ರ ಕನಿಷ್ಠ ವೇತನ ಕಾಯ್ದೆ ಹಾಗೂ ಇತರೆ ಕಾಯ್ದೆಗಳಡಿ ಕಾರ್ಮಿಕ ಇಲಾಖೆಯಿಂದ ಕ್ರಮ ಕೈಗೊಳ್ಳಲಾಗುವುದು.

ಸಂಚಾರಿ ಪಶು ಚಿಕಿತ್ಸಾಲಯಗಳು

2269 (2600); ಶ್ರೀ ಈಶ್ವರ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಸಂಚಾರಿ ಪಶು ಚಿಕಿತ್ಸಾಲಯಗಳಿವೆ; (ವಿವರ ನೀಡುವುದು);

ಆ) ಭಾಲ್ಕಿ ಸಂಚಾರಿ ಪಶು ಚಿಕಿತ್ಸಾಲಯಕ್ಕೆ ವೈದ್ಯಾಧಿಕಾರಿ ಹುದ್ದೆಯನ್ನು ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಹುದ್ದೆ ಮಂಜೂರು ಮಾಡಿ ವೈದ್ಯಾಧಿಕಾರಿಯನ್ನು ನೇಮಕ ಮಾಡಲು ಶೀಘ್ರ ಕ್ರಮ ಜರುಗಿಸಲಾಗುವುದೇ?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು)

ಅ) ಬೀದರ್ ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕಿಗೆ ಒಂದರಂತೆ ಒಟ್ಟು ಐದು ಸಂಚಾರಿ ಪಶು ಚಿಕಿತ್ಸಾಲಯಗಳಿರುತ್ತವೆ. ವಿವರ ಈ ಕೆಳಕಂಡಂತಿವೆ:

1) ಸಂಚಾರಿ ಪಶು ಚಿಕಿತ್ಸಾಲಯ, ಬೀದರ್.

2) ಸಂಚಾರಿ ಪಶು ಚಿಕಿತ್ಸಾಲಯ, ಔರಾದ.

3) ಸಂಚಾರಿ ಪಶು ಚಿಕಿತ್ಸಾಲಯ, ಭಾಲ್ಕಿ.

4) ಸಂಚಾರಿ ಪಶು ಚಿಕಿತ್ಸಾಲಯ, ಬಸವಕಲ್ಯಾಣ.

5) ಸಂಚಾರಿ ಪಶು ಚಿಕಿತ್ಸಾಲಯ, ಹುಮನಾಬಾದ.

ಆ) ಇಲಾಖಾ ಪುನರ್‌ರಚನೆ ಆದೇಶದಲ್ಲಿ ಭಾಲ್ಕಿ ತಾಲ್ಲೂಕಿನ ಸಂಚಾರಿ ಪಶು ಚಿಕಿತ್ಸಾಲಯಕ್ಕೆ ಒಂದು ಮುಖ್ಯ ಪಶುವೈದ್ಯಾಧಿಕಾರಿ ಹುದ್ದೆಯನ್ನು ಮಂಜೂರು ಮಾಡಲಾಗಿದೆ.

ಇ) ಮುಖ್ಯ ಪಶುವೈದ್ಯಾಧಿಕಾರಿ ಹುದ್ದೆಯು ಮುಂಬಡ್ತಿ ಹುದ್ದೆಯಾಗಿದ್ದು, ಪಶುವೈದ್ಯಾಧಿಕಾರಿಗಳಿಗೆ ಮುಂಬಡ್ತಿ ನೀಡುವ ಸಮಯದಲ್ಲಿ ಭಾಲ್ಕಿ ತಾಲ್ಲೂಕಿನ ಸಂಚಾರಿ ಪಶು ಚಿಕಿತ್ಸಾಲಯಕ್ಕೆ ಮುಖ್ಯ ಪಶುವೈದ್ಯಾಧಿಕಾರಿ ಹುದ್ದೆ ಭರ್ತಿ ಮಾಡಲು ಕ್ರಮವಹಿಸಲಾಗುತ್ತದೆ.

ಬೀದರ್ ಜಿಲ್ಲೆಯಲ್ಲಿನ ಜಲ್ಲಿ ಕ್ರಷರ್‌ಗಳು

2270 (2601); ಶ್ರೀ ಈಶ್ವರ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ರಾಜ್ಯದಲ್ಲಿ ಹೊಸದಾಗಿ ಜಲ್ಲಿ ಕ್ರಷರ್ ಪ್ರಾರಂಭಿಸಲು ಸರ್ಕಾರ ವಿಧಿಸಿರುವ ಷರತ್ತುಗಳೇನು; (ವಿವರ ನೀಡುವುದು);